**All India Radio: Bangalore**
**National Bulletin In Kannada**
**10.01.2026  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**10.01.2026  1.10 p.m.**

**<><><><>**

ಮುಖ್ಯಾಂಶಗಳು

1. ಇದೇ ೨೮ರಿಂದ ಸಂಸತ್ತಿನ ಬಜೆಟ್ ಅಧಿವೇಶನ ಆರಂಭ
2. ಸೋಮನಾಥ ಸ್ವಾಭಿಮಾನ ಪರ್ವದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಭಾಗಿ
3. ಮಾರ್ಚ್ ೩೧ ರಿಂದ ಮಾದಕವಸ್ತುಗಳ ವಿರುದ್ಧ ರಾಷ್ಟ್ರವ್ಯಾಪಿ ಅಭಿಯಾನ - ಕೇಂದ್ರ ಗೃಹ ಸಚಿವ ಅಮಿತ್ ಶಾ
4. ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್; ಇಂದಿನ ಪಂದ್ಯದಲ್ಲಿ ಯುಪಿ ವಾರಿಯರ್ಸ್ - ಗುಜರಾತ್ ಜೈಂಟ್ಸ್ ಮುಖಾಮುಖಿ

<><><><>

ಸಂಸತ್ತಿನ ಬಜೆಟ್ ಅಧಿವೇಶನ ಈ ತಿಂಗಳ ೨೮ರಿಂದ ಪ್ರಾರಂಭವಾಗಿ ಏಪ್ರಿಲ್ ೨ರ ವರೆಗೆ ನಡೆಯಲಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಬಜೆಟ್ ಅಧಿವೇಶನದ ಮೊದಲ ಹಂತ ಫೆಬ್ರವರಿ ೧೩ರಂದು ಮುಕ್ತಾಯಗೊಳ್ಳಲಿದೆ. ಬಜೆಟ್ ಅಧಿವೇಶನದ ಎರಡನೇ ಹಂತ ಮಾರ್ಚ್ ೯ರಂದು ಪ್ರಾರಂಭವಾಗಿ ಏಪ್ರಿಲ್ ೨ರಂದು ಮುಕ್ತಾಯಗೊಳ್ಳಲಿದೆ ಎಂದು ತಿಳಿಸಿದ್ದಾರೆ. ಅರ್ಥಪೂರ್ಣ ಚರ್ಚೆ ಮತ್ತು ಜನ ಕೇಂದ್ರಿತ ಆಡಳಿತದ ಕಡೆಗೆ ಇದು ಒಂದು ಪ್ರಮುಖ ಹೆಜ್ಜೆಯಾಗಿದೆ. ಕೇಂದ್ರ ಸರ್ಕಾರದ ಶಿಫಾರಸ್ಸಿನ ಮೇರೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ೨೦೨೬ರ ಬಜೆಟ್ ಅಧಿವೇಶನಕ್ಕಾಗಿ ಸಂಸತ್ತಿನ ಉಭಯ ಸದನಗಳನ್ನು ಕರೆಯಲು ಅನುಮೋದನೆ ನೀಡಿದ್ದಾರೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದಿನಿಂದ ಮೂರು ದಿನಗಳ ಕಾಲ ಗುಜರಾತ್‌ಗೆ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು ಸೋಮನಾಥ ಸ್ವಾಭಿಮಾನ ಪರ್ವ ಸೇರಿದಂತೆ ಹಲವಾರು ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ರಾಜ್‌ಕೋಟ್, ಅಹಮದಾಬಾದ್ ಮತ್ತು

ಗಾಂಧಿನಗರದ ಪ್ರಮುಖ ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ರಾಜತಾಂತ್ರಿಕ ಕಾರ್ಯಕ್ರಮಗಳಲ್ಲಿ ಪ್ರಧಾನಿ ಪಾಲ್ಗೊಳ್ಳಲಿದ್ದಾರೆ. ಸೋಮನಾಥ ದೇವಾಲಯದಲ್ಲಿ ನಾಲ್ಕು ದಿನಗಳ ಸೋಮನಾಥ ಸ್ವಾಭಿಮಾನ ಪರ್ವ ಕಳೆದ ಗುರುವಾರ ಗಿರ್ ಸೋಮನಾಥ ಜಿಲ್ಲೆಯ ಕರಾವಳಿ ಪಟ್ಟಣವಾದ ವೆರಾವಲ್‌ನಲ್ಲಿ ಪ್ರಾರಂಭವಾಯಿತು. ೧೦೨೬ನೇ ಇಸವಿಯಲ್ಲಿ ಮೊಹಮ್ಮದ್ ಘಜ್ನಿ, ಸೋಮನಾಥ ದೇವಾಲಯದ ಮೇಲೆ ಮೊದಲ ದಾಳಿ ನಡೆಸಿ ಒಂದು ಸಾವಿರ ವರ್ಷಗಳು ಸಂದ ಹಿನ್ನೆಲೆಯಲ್ಲಿ ಈ ಸ್ವಾಭಿಮಾನ ಪರ್ವವನ್ನು ಆಯೋಜಿಸಲಾಗಿದೆ. ಇದರ ಜೊತೆಗೆ ೧೯೫೧ರಲ್ಲಿ ದೇವಾಲಯವನ್ನು ಪುನರ್ ಸ್ಥಾಪಿಸಿದ ೭೫ನೇ ವಾರ್ಷಿಕೋತ್ಸವವನ್ನು ಆಚರಿಸಲಾಗುತ್ತಿದೆ.

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸಂಜೆ ಸೋಮನಾಥ ದೇವಾಲಯಕ್ಕೆ ಭೇಟಿ ನೀಡಿ, ಓಂಕಾರ ಮಂತ್ರ ಪಠಣದಲ್ಲಿ ಭಾಗವಹಿಸಲಿದ್ದಾರೆ. ದೇವಾಲಯದಲ್ಲಿ ಡ್ರೋನ್ ಪ್ರದರ್ಶನವನ್ನು ಸಹ ಅವರು ವೀಕ್ಷಿಸಲಿದ್ದಾರೆ. ಶತಮಾನಗಳಿಂದ ಸೋಮನಾಥ ದೇವಾಲಯವನ್ನು ರಕ್ಷಿಸುತ್ತಾ ಪ್ರಾಣತ್ಯಾಗ ಮಾಡಿದ ಅನೇಕ ವೀರರನ್ನು ಗೌರವಿಸಲು ನಾಳೆ ಆಯೋಜಿಸಲಾಗಿರುವ ಶೌರ್ಯ ಯಾತ್ರೆಯಲ್ಲಿ ಪ್ರಧಾನಿ ಪಾಲ್ಗೊಳ್ಳಲಿದ್ದಾರೆ.

<><><><>

ಈ ವರ್ಷ ಮಾರ್ಚ್ ೩೧ರಿಂದ ಮಾದಕವಸ್ತುಗಳ ವಿರುದ್ಧ ರಾಷ್ಟ್ರವ್ಯಾಪಿ ಅಭಿಯಾನ ಪ್ರಾರಂಭಿಸಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಘೋಷಿಸಿದ್ದಾರೆ. ಮುಂದಿನ ಮೂರು ವರ್ಷಗಳ ಕಾಲ ನಡೆಯಲಿರುವ ಈ ಅಭಿಯಾನ, ದೇಶವನ್ನು ಮಾದಕವಸ್ತುಗಳಿಂದ ಮುಕ್ತಗೊಳಿಸುವ ಗುರಿಯನ್ನು ಹೊಂದಿದೆ ಎಂದು ಹೇಳಿದರು. ಕೇಂದ್ರ ಸರ್ಕಾರದ ಎಲ್ಲಾ ಇಲಾಖೆಗಳು ೨೦೨೯ರ ವರೆಗೆ ಮಾರ್ಗಸೂಚಿಯನ್ನು ಸಿದ್ಧಪಡಿಸಬೇಕು ಮತ್ತು ಅದರ ಅನುಷ್ಠಾನಕ್ಕಾಗಿ ಸಮಯಕ್ಕೆ ಅನುಗುಣವಾಗಿ ಪರಿಶೀಲನಾ ಕಾರ್ಯ ವಿಧಾನವನ್ನು ಸ್ಥಾಪಿಸಬೇಕು ಎಂದು ಸೂಚಿಸಿರುವ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಮಾದಕವಸ್ತುಗಳ ಪಿಡುಗನ್ನು ಎದುರಿಸುವಲ್ಲಿ ದೇಶ ಗಣನೀಯ ಯಶಸ್ಸನ್ನು ಸಾಧಿಸಿದೆ ಎಂದು ತಿಳಿಸಿದರು. ೨೦೧೪ ರಿಂದ ೨೦೨೫ರ ನಡುವೆ ಒಂದು ಲಕ್ಷ ೭೧ ಸಾವಿರ ಕೋಟಿ ರೂಪಾಯಿ ಮೌಲ್ಯದ ಒಟ್ಟು ಒಂದು ಕೋಟಿ ೧೧ ಲಕ್ಷ ಕಿಲೋಗ್ರಾಂ ತೂಕದ ಮಾದಕದ್ರವ್ಯಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಸಚಿವ ಅಮಿತ್ ಶಾ ಮಾಹಿತಿ ನೀಡಿದರು.

<><><><>

ದೇಶದ ಯುವ ಜನರು ಬಲಿಷ್ಠ ಮತ್ತು ಸಮೃದ್ಧ ರಾಷ್ಟ್ರವನ್ನು ನಿರ್ಮಿಸುವ ಪ್ರೇರಕ ಶಕ್ತಿಯಾಗಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ, ವಿಕಸಿತ ಭಾರತ - ಯುವ ನಾಯಕರ ಸಂವಾದದಲ್ಲಿ ದೇಶದ ಯುವ ಜನರೊಂದಿಗೆ ತೊಡಗಿಸಿಕೊಳ್ಳಲು ಉತ್ಸುಕನಾಗಿದ್ದೇನೆ. ದೇಶದ ಯುವಶಕ್ತಿ ಅಪ್ರತಿಮ ಉತ್ಸಾಹದಿಂದ ನಡೆಸಲ್ಪಡುತ್ತಿದ್ದು, ದೇಶದ ಬೆಳವಣಿಗೆ ಮತ್ತು ಪ್ರಗತಿಗೆ ಬದ್ಧವಾಗಿದೆ ಎಂದು ಹೇಳಿದರು. ಸ್ವಾಮಿ ವಿವೇಕಾನಂದರ ಜನ್ಮದಿನಾಚರಣೆಯ ಸ್ಮರಣಾರ್ಥ ಸೋಮವಾರ ನವದೆಹಲಿಯಲ್ಲಿ ನಡೆಯಲಿರುವ ವಿಕಸಿತ ಭಾರತ ಯುವ ನಾಯಕರ ಸಂವಾದ - ೨೦೨೫ರ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ಭಾಗವಹಿಸಲಿದ್ದಾರೆ. ಈ ವೇಳೆ ಅಂತಾರಾಷ್ಟ್ರೀಯ ಪ್ರತಿನಿಧಿಗಳು ಸೇರಿದಂತೆ ದೇಶಾದ್ಯಂತದ ಮೂರು ಸಾವಿರ ಯುವಕರೊಂದಿಗೆ ಪ್ರಧಾನಿ ಸಂದಾದ ನಡೆಸಲಿದ್ದಾರೆ. ಇದೇ ವೇಳೆ ದೇಶದ ಅಭಿವೃದ್ಧಿ ಗುರಿಗಳು ಮತ್ತು ದೀರ್ಘಕಾಲೀನ ರಾಷ್ಟ್ರ ನಿರ್ಮಾಣದ ದೃಷ್ಟಿಕೋನದ ಕುರಿತು ಯುವಕರ ಆಯ್ದ ಪ್ರಬಂಧಗಳನ್ನು ಒಳಗೊಂಡ ಪ್ರಬಂಧ ಸಂಕಲನವನ್ನು ಅವರು ಬಿಡುಗಡೆ ಮಾಡಲಿದ್ದಾರೆ.

<><><>

ದೇಶದ ಭವಿಷ್ಯವನ್ನು ರೂಪಿಸುವಲ್ಲಿ ದೇಶದ ಯುವಕರ ಪಾತ್ರ ಅತ್ಯಗತ್ಯ ಎಂದು ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ವಿಕಸಿತ ಭಾರತ ಯುವ ನಾಯಕರ ಸಂವಾದ ೨೦೨೫ರ ಉದ್ಘಾಟನಾ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಸಚಿವರು, ತಂತ್ರಜ್ಞಾನ, ಉದ್ಯಮಶೀಲತೆ, ಆಡಳಿತ, ಸುಸ್ಥಿರತೆ ಮತ್ತು ಸಾಮಾಜಿಕ ಅಭಿವೃದ್ಧಿಯಂತಹ ಕ್ಷೇತ್ರಗಳಲ್ಲಿ ಪರಿಹಾರಗಳನ್ನು ನೀಡಲು ಯುವ ನಾಯಕರನ್ನು ಈ ಸಂವಾದ ಪ್ರೋತ್ಸಾಹಿಸುತ್ತದೆ ಎಂದು ಹೇಳಿದರು. ಈ ಸಂವಾದ ೨೦೪೭ರ ವೇಳೆಗೆ ವಿಕಸಿತ ಭಾರತವನ್ನು ನಿರ್ಮಿಸಲು ಯುವಜನರ ಪ್ರತಿಭೆ ಮತ್ತು ಸೃಜನಶೀಲತೆಯನ್ನು ಗುರುತಿಸುವಲ್ಲಿ ಸಹಕಾರಿಯಾಗಿದೆ. ದೇಶದ ಯುವಕರ ಜನಸಂಖ್ಯಾಬಲ ಅದರ ದೊಡ್ಡ ಶಕ್ತಿಯಾಗಿದೆ. ರಾಷ್ಟ್ರ ನಿರ್ಮಾಣದಲ್ಲಿ ಯುವ ಮನಸ್ಸುಗಳನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳುವ ಸರ್ಕಾರದ ಬದ್ಧತೆಯನ್ನು ವೇದಿಕೆ ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

<><><>

ಸಕ್ರಿಯ ಆಡಳಿತ ಮತ್ತು ಸಕಾಲಿಕ ಅನುಷ್ಠಾನಕ್ಕಾಗಿ ಪ್ರಧಾನಮಂತ್ರಿಗಳ ಪ್ರಮುಖ ವೇದಿಕೆಯಾದ ಪ್ರಗತಿ ತನ್ನ ೫೦ನೇ ಸಭೆಯನ್ನು ಯಶಸ್ವಿಯಾಗಿ ನಡೆಸುವುದರೊಂದಿಗೆ ಮಹತ್ವದ ಮೈಲಿಗಲ್ಲನ್ನು ಸಾಧಿಸಿದೆ. ಇಂದು ಈ ವಿಶೇಷ ಸರಣಿಯಲ್ಲಿ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯ ಕುರಿತು ವಿಶೇಷ ವರದಿ ಮೂಡಿಬರಲಿದೆ.

**ಧ್ವನಿ : ಅಭಯ್ ದಾಮ್ಲೆ**

ಪ್ರಗತಿ ಸಭೆಯ ಅಡಿಯಲ್ಲಿ, ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಸಂಪೂರ್ಣವಾಗಿ ಪರಿಶೀಲಿಸಿದರು. ಈ ಯೋಜನೆಯಡಿ ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರು ಮೊದಲ ಮಗುವಿಗೆ ೫ ಸಾವಿರ ರೂಪಾಯಿ ಮತ್ತು ಎರಡನೇ ಹೆಣ್ಣು ಮಗುವಿಗೆ ೬ ಸಾವಿರ ರೂಪಾಯಿ ನಗದು ಪ್ರಯೋಜನವನ್ನು ಪಡೆಯುತ್ತಾರೆ.

ಫಲಾನುಭವಿಗಳನ್ನು ಗುರುತಿಸಲು ಬಯೋಮೆಟ್ರಿಕ್ ಆಧಾರಿತ ಆಧಾರ್ ದೃಢೀಕರಣವನ್ನು ಕಟ್ಟುನಿಟ್ಟಾಗಿ ಮಾಡುವಮತೆ ಎಲ್ಲಾ ಸಚಿವಾಲಯಗಳು ಮತ್ತು ಇಲಾಖೆಗಳಿಗೆ ಸಭೆಯಲ್ಲಿ ಪ್ರಧಾನಿ ನಿರ್ದೇಶನ ನೀಡಿದ್ದರು. ೨೦೧೭ರಲ್ಲಿ ಈ ಯೋಜನೆ ಪ್ರಾರಂಭವಾದಾಗಿನಿಂದ ೪ ಕೋಟಿಗೂ ಹೆಚ್ಚು ಫಲಾನುಭವಿಗಳಿಗೆ ನೇರ ವರ್ಗಾವಣೆ ಮೂಲಕ ೨೦ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚಿನ ಮೊತ್ತವನ್ನು ಅವರ ಖಾತೆಗಳಿಗೆ ವರ್ಗಾಯಿಸಲಾಗಿದೆ. ಕಳೆದ ವರ್ಷ ಮೇ ೨೧ರಿಂದ ಎಲ್ಲಾ ಹೊಸ ದಾಖಲಾತಿಗಳಿಗೆ ಮುಖ ಗುರುತಿಸುವಿಕೆ ವ್ಯವಸ್ಥೆ ಮೂಲಕ ಕಡ್ಡಾಯ ಬಯೋಮೆಟ್ರಿಕ್ ಪರಿಶೀಲನೆಯನ್ನು ಪರಿಚಯಿಸಲಾಯಿತು. ಈ ವ್ಯವಸ್ಥೆಯ ಮೂಲಕ ಬಯೋಮೆಟ್ರಿಕ್ ಪರಿಶೀಲನೆಯ ನಂತರ ೨೩ ಲಕ್ಷಕ್ಕೂ ಹೆಚ್ಚು ಫಲಾನುಭವಿಗಳನ್ನು ದಾಖಲಿಸಲಾಗಿದೆ. ಆರೋಗ್ಯ ತಪಾಸಣೆ, ಉತ್ತಮ ಪೋಷಣೆ ಮತ್ತು ಆರ್ಥಿಕ ಜಾಗೃತಿಯನ್ನು ಉತ್ತೇಜಿಸುವ ಮೂಲಕ ಈ ಯೋಜನೆಯು ಮಹಿಳಾ ನೇತೃತ್ವದ ಅಭಿವೃದ್ಧಿಯ ಗುರಿಯನ್ನು ಬೆಂಬಲಿಸುತ್ತದೆ.

<><><><>

ನವಿ ಮುಂಬೈನಲ್ಲಿಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಯುಪಿ ವಾರಿಯರ್ಸ್ ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ಕಳೆದ ರಾತ್ರಿ ನಡೆದ

ಉದ್ಘಾಟನಾ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ, ಹಾಲಿ ಚಾಂಪಿಯನ್ ಮುಂಬೈ ಇಂಡಿಯನ್ಸ್ ತಂಡವನ್ನು ಮೂರು ವಿಕೆಟ್‌ಗಳಿಂದ ಮಣಿಸಿತು. ಮಹಿಳಾ ಪ್ರೀಮಿಯರ್ ಲೀಗ್‌ನ ನಾಲ್ಕನೇ ಆವೃತ್ತಿಯ ಮೊದಲ ಹಂತದ ಪಂದ್ಯಗಳು ನವಿ ಮುಂಬೈನ ಡಾ. ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ನಡೆಯಲಿದ್ದು, ಉಳಿದ ೧೧ ಪಂದ್ಯಗಳು ಸೇರಿದಂತೆ ಪ್ಲೇಆಫ್ ಪಂದ್ಯಗಳು ವಡೋದರಾದ ಬಿಸಿಎ ಕ್ರೀಡಾಂಗಣದಲ್ಲಿ ನಡೆಯಲಿವೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಭಾರತ ಇಂದು ದೃಢವಾಗಿ ನಿಂತಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ. ಪಂಜಾಬ್‌ನ ಜಲಂಧರ್ ಬಳಿಯ ಪಾಗ್ವಾರಾದಲ್ಲಿರುವ ಲವ್ಲಿ ಪ್ರೊಫೆಷನಲ್ ವಿದ್ಯಾಲಯದ ಘಟಿಕೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ೨೦೨೭ರ ವೇಳೆಗೆ ವಿಕಸಿತ ಭಾರತ ಆಗುವ ಪ್ರಯಾಣದತ್ತ ಭಾರತ ಸಾಗಿದೆ. ಅಭಿವೃದ್ಧಿ ಹೊಂದಿದ, ಸ್ವಾವಲಂಬಿ ಮತ್ತು ಆತ್ಮವಿಶ್ವಾಸದ ಭಾರತವನ್ನು ನಿರ್ಮಿಸುವ ಮಹತ್ವಾಕಾಂಕ್ಷೆಯ ಗುರಿಯನ್ನು ರಾಷ್ಟ್ರ ಹೊಂದಿದೆ. ಜಾಗತಿಕವಾಗಿ ಸೂಪರ್ ಪವರ್ ರಾಷ್ಟ್ರವಾಗುವ ನಿಟ್ಟಿನಲ್ಲಿ ಭಾರತ ಕೆಲಸ ಮಾಡುತ್ತಿದೆ ಎಂದರು. ವಿದ್ಯಾರ್ಥಿಗಳು ಮಾದಕದ್ರವ್ಯಗಳಿಂದ ದೂರವಿರಬೇಕು, ಜೊತೆಗೆ ತಮ್ಮ ಸ್ನೇಹಿತರೂ ಕೂಡ ಈ ಜಾಲಕ್ಕೆ ಸಿಲುಕದಂತೆ ಸಹಾಯ ಮಾಡಬೇಕು. ಈ ರೀತಿಯ ಪ್ರಯತ್ನಗಳು ಸಮಾಜಕ್ಕೆ ಮಹತ್ವದ ಕೊಡುಗೆಯಾಗುತ್ತವೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಸಲಹೆ ನೀಡಿದರು.

<><><><>

ಮಲೇಷ್ಯಾ ಓಪನ್ ಸೂಪರ್ ೧೦೦೦ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮಹಿಳಾ ಸಿಂಗಲ್ಸ್ ವಿಭಾಗದ ಸೆಮಿಫೈನಲ್ ಪಂದ್ಯದಲ್ಲಿಂದು ಚೀನಾದ ವಾಂಗ್ ಝಿ ಯಿ ವಿರುದ್ಧ ೧೬-೨೧, ೧೫-೨೧ ಸೆಟ್‌ಗಳಿಂದ ಪಿ.ವಿ. ಸಿಂಧು ಪರಾಭವಗೊಂಡಿದ್ದಾರೆ. ಈ ನಡುವೆ, ಭಾರತದ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ, ಪುರುಷರ ಡಬಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಇಂಡೋನೇಷ್ಯಾದ ಫಜರ್ ಅಲ್ಫಿಯಾನ್ ಮತ್ತು ಮುಹಮ್ಮದ್ ಫಿಕ್ರಿ ಜೋಡಿ ವಿರುದ್ಧ ೧೦-೨೧, ೨೧-೨೩ ಅಂತರದಲ್ಲಿ ಸೋತು ಪಂದ್ಯಾವಳಿಯಿಂದ ಹೊರನಡೆದಿದೆ. ಈ ಮೂಲಕ ಪಂದ್ಯಾವಳಿಯಲ್ಲಿ ಭಾರತದ ಅಭಿಯಾನ ಕೊನೆಗೊಂಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>